"ಅತೀ ಜರೂರು"

**ಕರ್ನಾಟಕ ಸರ್ಕಾರ**
**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ:ಕಾಶಿಇ/112/ಬ್ಯಾಕ್‌ಲಾಗ್/ನೇವಿ-2/2011-12 (ಭಾಗ-4)

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:30.11.2022.

**ಇವರಿಗೆ:**

ಜಂಟಿ ನಿರ್ದೇಶಕರು,
ಪ್ರಾದೇಶಿಕ ಕಛೇರಿ,
ಕಾಲೇಜು ಶಿಕ್ಷಣ ಇಲಾಖೆ,
**ಬೆಂಗಳೂರು, ಮೈಸೂರು, ಮಂಗಳೂರು,**
**ಶಿವಮೊಗ್ಗ, ಧಾರವಾಡ ಮತ್ತು ಕಲಬುರಗಿ.**

ಮಾನ್ಯರೆ,

ವಿಷಯ: ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಗುರುತಿಸಿರುವ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ.

ಉಲ್ಲೇಖ: 1) ಸರ್ಕಾರದ ಆದೇಶ ಸಂಖ್ಯೆ:ಇಡಿ/357/ಯುಪಿಸಿ/2002 ದಿ:19.12.2002.
2) ಈ ಕಛೇರಿಯ ಸಮಸಂಖ್ಯೆ ಸುತ್ತೋಲೆ ದಿನಾಂಕ:17.08.2022.
3) ಈ ಕಛೇರಿಯ ಸಮಸಂಖ್ಯೆ ಆದೇಶ ದಿನಾಂಕ:20.10.2022.

** ** **

ಇಲಾಖಾ ವ್ಯಾಪ್ತಿಯಲ್ಲಿ ಬರುವ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಮೀಸಲಾಗಿರುವ ಬ್ಯಾಕ್‌ಲಾಗ್ ಹುದ್ದೆಗಳನ್ನು ಗುರುತಿಸಿ ಉಲ್ಲೇಖ(1)ರ ಸರ್ಕಾರದ ಆದೇಶದಲ್ಲಿ ಪ್ರಕಟಿಸಲಾಗಿದೆ. ಈ ರೀತಿ ಗುರುತಿಸಿರುವ ಬ್ಯಾಕ್‌ಲಾಗ್ ಹುದ್ದೆಗಳ ಪೈಕಿ ಈಗಾಗಲೇ ಕೆಲವು ಬೋಧಕ-ಬೋಧಕೇತರ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಲಾಗಿದೆ.

ಆದರೆ ಇನ್ನೂ ಹಲವಾರು ಕಾಲೇಜುಗಳಲ್ಲಿ ಬಾಕಿಯಿರುವ ಬೋಧಕ-ಬೋಧಕೇತರ ಬ್ಯಾಕ್‌ಲಾಗ್ ಹುದ್ದೆಗಳನ್ನು ಕೆಲವು ಕಾರಣಗಳಿಂದ ಈವರೆಗೂ ಭರ್ತಿ ಮಾಡಿರುವುದಿಲ್ಲ. ಖಾಲಿಯಿರುವ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಉಲ್ಲೇಖ(2) & (3)ರಲ್ಲಿ ಅಗತ್ಯ ಮಾರ್ಗಸೂಚಿ ನೀಡಿದ್ದು, ಅದರಂತೆ ನಿಯಮಾನುಸಾರ ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿದೆ. ಆದಾಗ್ಯೂ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡುವ ಪ್ರಕ್ರಿಯೆ ಬಗ್ಗೆ ತ್ವರಿತವಾಗಿ ಕ್ರಮ ಕೈಗೊಳ್ಳದಿರುವುದನ್ನು ಸರ್ಕಾರವು ಗಂಭೀರವಾಗಿ ಪರಿಗಣಿಸಿದೆ.

ಅಲ್ಲದೆ, ಪ್ರಸ್ತುತ ಬಾಕಿ ಇರುವ ಪರಿಶಿಷ್ಟ ಜಾತಿ & ಪರಿಶಿಷ್ಟ ಪಂಗಡಗಳ ಹಿಂಬಾಕಿ (ಬ್ಯಾಕ್‌ಲಾಗ್) ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಉಸ್ತುವಾರಿಗಾಗಿ ರಚಿಸಲಾಗಿರುವ ಸಚಿವ

ಸಂಪುಟ ಉಪ ಸಮಿತಿಗೆ ಬ್ಯಾಕ್‌ಲಾಗ್ ಹುದ್ದೆಗಳ ಮಾಹಿತಿಯನ್ನು ಸಲ್ಲಿಸಬೇಕಾಗಿರುವುದು ಅತ್ಯವಶ್ಯವಿರುತ್ತದೆ.

ಆದ್ದರಿಂದ ತಮ್ಮ ಕಛೇರಿ ವ್ಯಾಪ್ತಿಯಲ್ಲಿ ಬರುವ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಉಲ್ಲೇಖ(1)ರ ಸರ್ಕಾರದ ಆದೇಶದಲ್ಲಿ ಗುರುತಿಸಿರುವ ಬ್ಯಾಕ್‌ಲಾಗ್ ಹುದ್ದೆಗಳ ಪೈಕಿ ಭರ್ತಿ ಮಾಡಲು ಬಾಕಿ ಇರುವ ಬ್ಯಾಕ್‌ಲಾಗ್ ಹುದ್ದೆಗಳ ಮಾಹಿತಿಯನ್ನು (ಆಡಳಿತ ಮಂಡಳಿವಾರು/ಕಾಲೇಜುವಾರು) ಈ ಪತ್ರದೊಂದಿಗೆ ಲಗತ್ತಿಸಲಾಗಿದೆ. ಈ ಹುದ್ದೆಗಳನ್ನು ತುರ್ತಾಗಿ ಭರ್ತಿ ಮಾಡಲು ನಿಯಮಾನುಸಾರ ಕ್ರಮ ಕೈಗೊಳ್ಳಬೇಕಾಗಿರುವುದರಿಂದ **ದಿನಾಂಕ:01.12.2022 ರಂದು ಸಂಜೆ 4.00 ಗಂಟೆಗೆ ಮಾನ್ಯ ಆಯುಕ್ತರ ಅಧ್ಯಕ್ಷತೆಯಲ್ಲಿ ಸಭೆಯನ್ನು Video Conference (WebEx) ಮೂಲಕ ಆಯೋಜಿಸಲಾಗಿದ್ದು**, ಈ ಸಭೆಗೆ ಸಂಬಂಧಪಟ್ಟ ಪ್ರಾದೇಶಿಕ ಜಂಟಿ ನಿರ್ದೇಶಕರು, ಸಹಾಯಕ ನಿರ್ದೇಶಕರು & ಅಧೀಕ್ಷಕರು ಅಗತ್ಯ ಮಾಹಿತಿ/ದಾಖಲೆಗಳೊಂದಿಗೆ ಕಡ್ಡಾಯವಾಗಿ ಹಾಜರಿರತಕ್ಕದ್ದು ಹಾಗೂ ಬ್ಯಾಕ್‌ಲಾಗ್ ಹುದ್ದೆ ಭರ್ತಿ ಮಾಡಲು ಬಾಕಿ ಇರುವ ಕಾಲೇಜುಗಳಿಗೆ ಸಂಬಂಧಿಸಿದಂತೆ, ಆಡಳಿತ ಮಂಡಳಿಯ ಅಧ್ಯಕ್ಷರು/ಕಾರ್ಯದರ್ಶಿಗಳು ಹಾಗೂ ಕಾಲೇಜಿನ ಪ್ರಾಂಶುಪಾಲರು ಅಗತ್ಯ ಮಾಹಿತಿ ಹಾಗೂ ದಾಖಲಾತಿಗಳೊಂದಿಗೆ ಸದರಿ ಸಭೆಗೆ ಕಡ್ಡಾಯವಾಗಿ ಹಾಜರಿರುವಂತೆ ಪ್ರಾದೇಶಿಕ ಜಂಟಿ ನಿರ್ದೇಶಕರು ಸೂಚಿಸತಕ್ಕದ್ದು.

**"ಮಾನ್ಯ ಆಯುಕ್ತರ ಆದೇಶದ ಮೇರೆಗೆ"**

ತಮ್ಮ ವಿಶ್ವಾಸಿ,

30/11/22

**ಕಾಲೇಜು ಶಿಕ್ಷಣ ಹೆಚ್ಚುವರಿ ನಿರ್ದೇಶಕರು**

**ಇವರಿಗೆ,**

(1) ಜಂಟಿ ನಿರ್ದೇಶಕರು, ಪ್ರಾದೇಶಿಕ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಮಂಗಳೂರು, ಧಾರವಾಡ, ಶಿವಮೊಗ್ಗ & ಕಲಬುರಗಿ-ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
(2) ಇಲಾಖಾ ವ್ಯಾಪ್ತಿಗೊಳಪಡುವ ಎಲ್ಲಾ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಆಡಳಿತ ಮಂಡಳಿಗೆ – ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
(3) ಇಲಾಖಾ ವ್ಯಾಪ್ತಿಗೊಳಪಡುವ ಎಲ್ಲಾ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
(4) ಮಾಹಿತಿ ಅಧಿಕಾರಿಗಳು, ಕೇಂದ್ರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು-ಈ ಸುತ್ತೋಲೆಯನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸುವಂತೆ ಸೂಚಿಸಲಾಗಿದೆ.
(5) ಹೆಚ್ಚುವರಿ ಪ್ರತಿ.
(6) ಕಛೇರಿ ಪ್ರತಿ.